## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 04 |
| 2 | ಸದಸ್ಯರ ಹೆಸರು | : | ಶ್ರೀಮತಿ ತಾರಾ ಅನುರಾಧ |
| 3 | ಉತ್ತರಿಸುವ ದಿನಾಂಕ | : | 10-07-2018 |
| 4 | ಉತ್ತರಿಸುವವರು | : | ಮಾನ್ಯ ಉಪಮುಖ್ಯಮಂತ್ರಿಗಳು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಅವ್ಯವಸ್ಥೆಗಳ ಮಹಾಪೂರಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿವೆಯೇ; | ಬಂದಿದೆ. |
| ಆ) | ಈಗಲೂ ಮಳೆ ಬಂದರೆ ನದಿಯ ಹಾಗೆ ಬದಲಾಗುವ ರಾಜಧಾನಿಯ ಅನೇಕ ರಸ್ತೆಗಳು ಹಾಗೂ ಬಡಾವಣೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; | 2016-17 ಮತ್ತು 2017-18ನೇ ಸಾಲಿನಲ್ಲಿ ಸರ್ಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೃಹತ್ ನೀರುಗಾಲುವೆ ಅಭಿವೃದ್ಧಿ ಮತ್ತು ನಿರ್ವಹಣೆ ಕಾಮಗಾರಿಗಳಿಗೆ ಒಟ್ಟು ರೂ. 1217 ಕೋಟಿಗಳ ಕ್ರಿಯಾ ಯೋಜನೆಯನ್ನು ಅನುಮೋದಿಸಲಾಗಿದ್ದು, ಇವುಗಳ ಪೈಕಿ ಬಹುತೇಕ ಕಾಮಗಾರಿಗಳು ಪ್ರಾರಂಭಗೊಂಡಿರುತ್ತವೆ. ಇದಲ್ಲದೇ 2016-17 ಮತ್ತು 2017-18ನೇ ಸಾಲಿನಲ್ಲಿ ವಾರ್ಡ್ ರಸ್ತೆ ಚರಂಡಿಗಳ ಅಭಿವೃದ್ಧಿಗಾಗಿ ರೂ.1400 ಕೋಟಿಗಳ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಈ ಅನುದಾನದಲ್ಲಿ ಹದಗೆಟ್ಟ ವಲಯ ಮತ್ತು ಪ್ರಮುಖ ರಸ್ತೆಗಳ ಅಭಿವೃದ್ಧಿಪಡಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಕ್ರಮವಹಿಸಲಾಗಿದೆ. ಪಾಲಿಕೆಯ ಕೆಲವು ಬಡಾವಣೆಗಳಲ್ಲಿ ಹಾಗೂ ತಗ್ಗು ಪ್ರದೇಶಗಳಲ್ಲಿ ಜಾಸ್ತಿ ಮಳೆ ಬಂದಾಗ ಆಗುವ ಅನಾಹುತವನ್ನು ತಡೆಯಲು ಬೃಹತ್ ನೀರುಗಾಲುವೆಗಳ ಅಭಿವೃದ್ಧಿ ಕಾಮಗಾರಿಗಳಾದ ಆರ್.ಸಿ.ಸಿ. ಗೋಡೆಗಳ ನಿರ್ಮಾಣ ಹಾಗೂ ಅಡಿಗಾಲುವೆಗಳು, ಸೇತುವೆಗಳ ನಿರ್ಮಾಣ ಮತ್ತು ಗೋಡೆ ಎತ್ತುವ ಕಾಮಗಾರಿಗಳು ಕೈಗೊಂಡು ಮುಂದಿನ ದಿನಗಳಲ್ಲಿ ಆಗುವ ಅನಾಹುತವನ್ನು ತಡೆಗಟ್ಟಲು ಕ್ರಮವಹಿಸಲಾಗಿದೆ. |
| | | ಪಾಲಿಕೆಯ ಅನುದಾನದಲ್ಲಿ ಪ್ರತಿ ವಾರ್ಡ್‌ಗೆ ಪಿಡಬ್ಲ್ಯೂ ಕಾಮಗಾರಿಗಳಿಗೆ ನಿಗಧಿಪಡಿಸಿದ ಅನುದಾನದಲ್ಲಿ ಶೇಕಡಾ 10 ರಷ್ಟು ಅನುದಾನವನ್ನು ಬಳಸಿಕೊಂಡು ಮಳೆಗಾಲದಲ್ಲಿ ಉದ್ಭವಿಸುವ ರಸ್ತೆ ಗುಂಡಿಗಳ ಮುಚ್ಚುವ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |
| ಇ) | ಮಳೆಗಾಲದಲ್ಲಿ ಹಳೆಯ ಮರಗಳು ಧರೆಗೆ ಉರುಳಿ ವಾಹನಕ್ಕೆ ಹಾಗೂ ಜನರ ಮನೆಗಳ ಮೇಲೆ ಬೀಳುವುದು, ಇದರ ತಡೆಯುವಿಕೆಗೆ ಸರ್ಕಾರ ಪಾಲಿಸುತ್ತಿರುವ ನಿಯಮಗಳು ಏನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅರಣ್ಯ ಘಟಕದ ವತಿಯಿಂದ ಮಳೆಗಾಲದಲ್ಲಿ ಧರೆಗೆ ಉರುಳಿರುವ ಮರಗಳ ಬಗ್ಗೆ ಮಾಹಿತಿ ಪಡೆದು, ತಕ್ಷಣ ಅವುಗಳನ್ನು ತೆರವುಗೊಳಿಸಲು 21 ಮರಗಳ ವ್ಯವಸ್ಥಿತ ನಿರ್ವಹಣೆ ತಂಡಗಳನ್ನು ರಚಿಸಲಾಗಿದ್ದು, ಅವುಗಳ ಸಹಾಯದಿಂದ ಬಿದ್ದ ಮರಗಳನ್ನು ತೆರವುಗೊಳಿಸಲು ಕ್ರಮಗಳನ್ನು ವಹಿಸಲಾಗುತಿದೆ. |

| | | |
|---|---|---|
| ಈ) | ನಗರದಲ್ಲಿ ಹೊಸದಾಗಿ ನಿರ್ಮಾಣವಾಗಿರುವ ಸುರಂಗ ಮಾರ್ಗಗಳು ಕೆರೆಗಳಾಗಿ ಮಾರ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು ಬೆಂಗಳೂರು ನಗರದಲ್ಲಿ ನಿರ್ಮಾಣವಾಗಿರುವ ಅಂಡರ್ ಪಾಸ್‌ಗಳಲ್ಲಿ ನೀರು ನಿಲ್ಲದಂತೆ ಎಲ್ಲಾ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಾಗೂ ಪಾಲಿಕೆಯಿಂದ ನಿರ್ಮಾಣ ವಾಗುತ್ತಿರುವ 08 ಪಥದ ಸಿಗ್ನಲ್ ಫ್ರೀ ಕಾರಿಡಾರ್ ಯೋಜನೆಯಲ್ಲಿ ಬರುವ ಕೆಳಸೇತುವೆ ಕಾಮಗಾರಿ ಪೂರ್ಣಗೊಂಡಿದ್ದು, ಕೆಳಸೇತುವೆಯಿಂದ ನೀರನ್ನು ಸರಾಗವಾಗಿ ಸಾಗಿಸಲು ಪೈಪ್‌ಲೈನ್ ಕಾಮಗಾರಿಯು ಪ್ರಗತಿಯಲ್ಲಿದೆ. ಮಳೆ ಬಂದಾಗ ಸದರಿ ಕೆಳಸೇತುವೆಯಲ್ಲಿ ಪ್ರವಾಹ ಉಂಟಾದಲ್ಲಿ ಪಂಪ್‌ಗಳನ್ನು ಅಳವಡಿಸಿ ನೀರನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ನಅಇ 351 ಎಂಎನ್‌ವೈ 2018

(ಡಾ|| ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ